ಕರ್ನಾಟಕ ಸರ್ಕಾರ
(ಸಾರಿಗೆ ಇಲಾಖೆ)

ಸಂ.ಸಾಆ/ಪ್ರ-3/ವೈವ-256/2019-20

ಆಯುಕ್ತರ ಕಛೇರಿ, ಸಾರಿಗೆ ಮತ್ತು ರಸ್ತೆ ಸುರಕ್ಷತೆ,
1ನೇ ಮಹಡಿ, 'ಎ' ಬ್ಲಾಕ್, ಟಿ.ಟಿ.ಎಂ.ಸಿ. ಕಟ್ಟಡ,
ಕೆ.ಹೆಚ್. ರಸ್ತೆ ಶಾಂತಿನಗರ, ಬೆಂಗಳೂರು-27.
ದಿನಾಂಕ:01-06-2020. ದೂ:080-22214900
ಮಿಂಚಂಚೆ: transcom@nic.in.

## ಸುತ್ತೋಲೆ

ವಿಷಯ : ಕೋವಿಡ್-19 ಲಾಕ್‌ಡೌನ್ ಹಿನ್ನಲೆಯಲ್ಲಿ ಅನುಪಯುಕ್ತತೆ ಮಾಡಿದ ವಾಹನಗಳನ್ನು ಬಿಡುಗಡೆಗೊಳಿಸುವ ಬಗ್ಗೆ.

ಉಲ್ಲೇಖ : 1) MoRTH, New Delhi ಇವರ ಪತ್ರ No.RT-11012/02/2019, MVL (Pt-8) ದಿನಾಂಕ:30-03-2020.
2) ಶಿವಮೊಗ್ಗ ಬಸ್ ಮಾಲೀಕರ ಸಂಘ, ಶಿವಮೊಗ್ಗ ಇವರ ಮನವಿ ಪತ್ರ ದಿನಾಂಕ:01-06-2020.

***

ಕೋವಿಡ್-19 ಸೋಂಕಿನ ಹಿನ್ನಲೆ ಮತ್ತು ಕೇಂದ್ರ ಸರ್ಕಾರದ ಮಾರ್ಗದರ್ಶನದಡಿಯಲ್ಲಿ ರಾಜ್ಯಾದ್ಯಂತ ಮುನ್ನಚ್ಚರಿಕೆ ಕ್ರಮವಾಗಿ ಲಾಕ್‌ಡೌನ್ ಘೋಷಿಸಲಾಗಿತ್ತು. ಈ ಸಂಬಂಧ ರಾಜ್ಯದಲ್ಲಿ ಎಲ್ಲಾ ರೀತಿಯ ಸಾರ್ವಜನಿಕ ಸಂಚಾರ ಮತ್ತು ಸಾರ್ವಜನಿಕ ಪ್ರಯಾಣಿಕರ ವಾಹನಗಳ ಓಡಾಟದ ಮೇಲೆ ನಿರ್ಬಂಧವನ್ನು ಹೇರಲಾಗಿತ್ತು. ಈ ಸಂಬಂಧವಾಗಿ ರಾಜ್ಯದಲ್ಲಿರುವ ಖಾಸಗಿ ಬಸ್‌ಗಳ ಮಾಲೀಕರು ಮತ್ತು ಸರಕು ಸಾಗಣೆ ವಾಹನ ಮಾಲೀಕರು ತಮ್ಮ ವಾಹನಗಳನ್ನು ಸಂಬಂಧಪಟ್ಟ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ಕರ್ನಾಟಕ ಮೋಟಾರು ವಾಹನ ತೆರಿಗೆ ಕಾಯ್ದೆ, 1957 ರ ಸೆಕ್ಷನ್ 16 ರಡಿಯಲ್ಲಿ ಕರ್ನಾಟಕ ಸರ್ಕಾರವು ಹೊರಡಿಸಿದ ಅಧಿಸೂಚನೆಯ ಪ್ರಕಾರ ಅಧ್ಯರ್ಪಣ (Surrender) ಮಾಡಿರುತ್ತಾರೆ.

ಕೇಂದ್ರೀಯ ಗೃಹ ಮಂತ್ರಾಲಯ, ನವದೆಹಲಿ ಹೊರಡಿಸಿದ ಆದೇಶದ ಹಿನ್ನಲೆಯಲ್ಲಿ ರಾಜ್ಯ ಸರ್ಕಾರವು ದಿನಾಂಕ:18-05-2020ರ ಆದೇಶದಲ್ಲಿ ಸಾರ್ವಜನಿಕ ಪ್ರಯಾಣಿಕರ ವಾಹನಗಳ ಮೇಲೆ ವಿಧಿಸಿದ್ದ ನಿರ್ಬಂಧವನ್ನು ಸಡಿಲಗೊಳಿಸಿ ಪ್ರಯಾಣಿಕರ ಮತ್ತು ಸರಕು ಸಾಗಣೆ ವಾಹನಗಳ ಓಡಾಟಕ್ಕೆ ಅನುವು ಮಾಡಿಕೊಟ್ಟಿರುವುದರಿಂದ ಕೂಡಲೇ ಪ್ರಾದೇಶಿಕ ಸಾರಿಗೆ ಕಛೇರಿಗಳಿಗೆ ವಾಹನಗಳ ಮಾಲೀಕರು ತಮ್ಮ ವಾಹನಗಳ ಅಧ್ಯರ್ಪಣವನ್ನು ಹಿಂಪಡೆಯಲು ಲಾಕ್‌ಡೌನ್ ಅವಧಿಯಲ್ಲಿ ಯಾವುದೇ ವಾಹನಗಳು ರಸ್ತೆಯಲ್ಲಿ ಓಡಾಡುವ ಸಂದರ್ಭಗಳು ಇಲ್ಲದೇ ಇರುವುದರಿಂದ ಉಲ್ಲೇಖಿತ (2)ರ ಮನವಿಯ ಮೂಲಕ ವಾಹನಗಳ ಬಿಡುಗಡೆಯ ಕ್ರಮದಲ್ಲಿ ವಿಳಂಬವಾಗದಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆಗಳನ್ನು ನೀಡಲು ಕೋರಿರುತ್ತಾರೆ.

...2

ಅಧ್ಯರ್ಪಣದಲ್ಲಿರುವ ವಾಹನಗಳು ವಾಹನದ ಅನುಪಯುಕ್ತತೆಯ ಅವಧಿಯಲ್ಲಿ ರಾಜ್ಯದಲ್ಲಾಗಲೀ / ಅಂತರರಾಜ್ಯದಲ್ಲಾಗಲೀ ಆಚರಿಸಿದ್ದು ತನಿಖಾ ವರದಿ ಮೂಲಕ ಮುಂದೆ ಕಂಡುಬಂದಲ್ಲಿ ಆ ಅವಧಿಯ ತೆರಿಗೆ ಪಾವತಿಸಲು ಬದ್ಧರಾಗಿರುತ್ತೇವೆಂದು ನೋಂದಣಿ ಅಧಿಕಾರಿಗಳು ವಾಹನ ಮಾಲೀಕರಿಂದ ಹೇಳಿಕೆ ತೆಗೆದುಕೊಳ್ಳುವುದು. ಕೋವಿಡ್–19 ಲಾಕ್‌ಡೌನ್ ಅವಧಿಯನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ ಅಧ್ಯರ್ಪಣ ಮಾಡಿದ ವಾಹನಗಳ ಬಿಡುಗಡೆಗಾಗಿ ಮೋಟಾರು ವಾಹನ ನಿರೀಕ್ಷಕರಿಂದ ಪರಿಶೀಲನಾ ವರದಿಯನ್ನು ಪಡೆಯದೇ ಸಂಬಂಧಪಟ್ಟ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಅಧ್ಯರ್ಪಣ ಬಿಡುಗಡೆಯ ಪ್ರಕ್ರಿಯೆಯನ್ನು ಕೈಗೆತ್ತಿಕೊಂಡು ಕೋವಿಡ್–19 ಲಾಕ್‌ಡೌನ್ ಸಂದರ್ಭದಲ್ಲಿ ಅಧ್ಯರ್ಪಣಗೊಳಿಸಿದ ವಾಹನಗಳ ಬಿಡುಗಡೆಗೆ ತ್ವರಿತವಾಗಿ ಕ್ರಮಕೈಗೊಳ್ಳಲು ಈ ಮೂಲಕ ಸೂಚಿಸಲಾಗಿದೆ.

ಆಯುಕ್ತರು, 02/06
ಸಾರಿಗೆ ಮತ್ತು ರಸ್ತೆ ಸುರಕ್ಷತೆ,
ಬೆಂಗಳೂರು.

ಇವರಿಗೆ,

1) ರಾಜ್ಯದ ಎಲ್ಲಾ ಅಪರ ಸಾರಿಗೆ ಆಯುಕ್ತರು ಮತ್ತು ಜಂಟಿ ಸಾರಿಗೆ ಆಯುಕ್ತರುಗಳ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ.
2) ರಾಜ್ಯದ ಎಲ್ಲಾ ಉಪ ಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ / ಪ್ರಾದೇಶಿಕ / ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
3) ಅಪರ ಸಾರಿಗೆ ಆಯುಕ್ತರು (ಪರಿಸರ ಮತ್ತು ಇ–ಆಡಳಿತ), ಬೆಂಗಳೂರು ರವರು ಸುತ್ತೋಲೆಯ ಪ್ರತಿಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಕ್ತ ಕ್ರಮಕ್ಕಾಗಿ.